ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತಮೂರನೆಯ ಅಧಿವೇಶನ

ಮಂಗಳವಾರ, ದಿನಾಂಕ: 2ನೇ ಫೆಬ್ರುವರಿ, 2021

ಮೈಸೂರು ಮಹಾನಗರ ಪಾಲಿಕೆಯಲ್ಲಿ ನಿಯಮ ಬಾಹಿರ ಪೌರ ಕಾರ್ಮಿಕರ ಸೇವೆ

ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) :-

198(224) ಮಾನ್ಯ ಪೌರಾಡಳಿತ ಹಾಗೂ ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಇತ್ತೀಚೆಗೆ ಮೈಸೂರು ಮಹಾನಗರ ಪಾಲಿಕೆಯಲ್ಲಿ ಸರ್ಕಾರದ ನಿಯಮದಂತೆ ಜನಸಂಖ್ಯೆ ಆಧಾರವಾಗಿ ಪೌರಕಾರ್ಮಿಕರನ್ನು ನೇಮಿಸಿಕೊಳ್ಳುವ ಬದಲು ನಿಯಮಗಳನ್ನು ಉಲ್ಲಂಘಿಸಿ ಅಧಿಕ ಪೌರಕಾರ್ಮಿಕರ ಸೇವೆಯನ್ನು ಪಡೆಯಲು ಮುಂದಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರದ ಕ್ರಮವೇನು; (ವಿವರ ನೀಡುವುದು)

(ಆ) ಮೈಸೂರು ಮಹಾನಗರ ಪಾಲಿಕೆಯಲ್ಲಿ ಸದರಿ ನಿಯಮಬಾಹಿರ ಕಾರ್ಯದಿಂದ ಅನಗತ್ಯ ದುಂದು ವೆಚ್ಚದಿಂದ ಸರ್ಕಾರದ ಬೊಕ್ಕಸಕ್ಕೆ ಸಾರ್ವಜನಿಕರ ತೆರಿಗೆ ಹಣ ಮತ್ತು ಪಾಲಿಕೆಯ ಸಂಪತ್ತಿಗೆ ಹಾನಿಯಾಗುವ ಕುರಿತು ಸರ್ಕಾರ ಚಿಂತನೆ ನಡೆಸಿದೆಯೇ; (ವಿವರ ನೀಡುವುದು)

(ಇ) ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಜನಸಂಖ್ಯೆಗೆ ಅನುಗುಣವಾಗಿ ಪೌರಕಾರ್ಮಿಕರ ಸೇವೆಯನ್ನು ಪಡೆಯುತ್ತಿದ್ದು ಇತರೆ ಮಹಾನಗರ ಪಾಲಿಕೆಗಳು ಈ ರೀತಿಯ ನಿಯಮ ಬಾಹಿರ ಕಾರ್ಯ ಚಟುವಟಿಕೆಗಳನ್ನು ಕೈಗೊಳ್ಳುವುದನ್ನು ನಿರ್ಬಂಧಿಸುವ ಕುರಿತು ಸರ್ಕಾರದ ಕ್ರಮವೇನು ? (ವಿವರ ನೀಡುವುದು)